ಕಿಲಾರಿ ತಳಿ ಸಂವರ್ಧನಾ ಕೇಂದ್ರ, ಬಂಕಾಪುರಕ್ಕೆ ಕಳೆದ 3 ವರ್ಷಗಳಲ್ಲಿ ಪಶುಪಾಲನಾ ಇಲಾಖಾ ವತಿಯಿಂದ ಬಿಡುಗಡೆಯಾದ ಮತ್ತು ಖರ್ಚಾದ ವಂಟನ ವಿವರ ಈ ಕೆಳಕಂಡಂತೆ ಇರುತ್ತದೆ.

(₹. ಲಕ್ಷಗಳಲ್ಲಿ)

ಕ್ರ. ಸಂ.	ಕಾರ್ಯಕ್ರಮ	ವರ್ಷ					
		2011–12		2012–13		2013–14	
		ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ	ಬಿಡುಗಡೆ	ವೆಚ್ಚ
1	ಕಾಮಗಾರಿಗಳ ನಿರ್ವಹಣೆ	24.00	24.00	18.00	18.00	20.00	20.00
2	ಕ್ಷೇತ್ರದ ನಿರ್ವಹಣೆಗಾಗಿ	32.35	30.36	45.88	45.72	51.41	49.81

ನವಿಲು ಧಾಮವು ಅರಣ್ಯ ಇಲಾಖೆಯ ಅಧೀನದಲ್ಲಿರುವುದರಿಂದ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖಾ ವತಿಯಿಂದ ಯಾವುದೇ ಅನುದಾನ ಬಿಡುಗಡೆಯಾಗಿರುವುದಿಲ್ಲ.

(ಆ) ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖಾ ವತಿಯಿಂದ ಅಭಿವೃದ್ಧಿ ಕಾಮಗಾರಿಗಳ ಅನುಷ್ಠಾನ ಮತ್ತು ಕ್ಷೇತ್ರ ನಿರ್ವಹಣೆಯ ವೆಚ್ಚಗಳನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999, ನಿಯಮ 2000 ಅನ್ವಯ ಹಾಗೂ ಸರ್ಕಾರದ ನಿಯಮಾವಳಿಗಳ ಅನುಸಾರ ಮಾಡಲಾಗಿದ್ದು, ಯಾವುದೇ ಅನುದಾನ, ದುರುಪಯೋಗವಾಗಿಲ್ಲದಿರುವುದರಿಂದ ಸರ್ಕಾರದಿಂದ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ.

ಜಾನುವಾರು ರೋಗ ನಿಯಂತ್ರಣಕ್ಕೆ ಚೆಕ್ ಪೋಸ್ಟ್ ನಿಗಾ ಘಟಕ ಸ್ಥಾಪನೆ

91(235) ಶ್ರೀ ಕ್ಯಾತ್ಸಂದ್ರ ಎನ್.ರಾಜಣ್ಣ :– ಮಾನ್ಯ ಕಾನೂನು, ನ್ಯಾಯ, ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶು ಸಂಗೋಪನೆ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕು ಗಡಿಭಾಗದಲ್ಲಿದ್ದು, ಇಲ್ಲಿ ಜಾನುವಾರು ರೋಗಗಳ ನಿಯಂತ್ರಣಕ್ಕಾಗಿ ಚೆಕ್‌ಪೋಸ್ಟ್‌-ನಿಗಾ ಘಟಕ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಆ) ಹಾಗಿದ್ದಲ್ಲಿ, ಯಾವಾಗ ಸ್ಥಾಪಿಸಲಾಗುವುದು (ವಿವರ ನೀಡುವುದು) ;

ಶ್ರೀ ಟಿ.ಬಿ. ಜಯಸಂದ್ರ :– (ಮಾನ್ಯ ಕಾನೂನು, ನ್ಯಾಯ, ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪಶು ಸಂಗೋಪನೆ ಸಚಿವರು)

(ಅ) ಇದೆ

(ಆ) ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ.

ಹಣಕಾಸು ಇಲಾಖೆಗೆ ಬಂದ ಅನುದಾನ

94(216) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ) :–ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ದಿನಾಂಕ:01–05–2013 ರಿಂದ 01–06–2014 ರವರೆಗೆ ಹಣಕಾಸು ಇಲಾಖೆಗೆ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ವಿವಿಧ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ನೀಡಿರುವ ಹಣದ ಮೊತ್ತವೆಷ್ಟು; ಇದೇ ಅವಧಿಯಲ್ಲಿ ರಾಜಸ್ವ ಸಂಗ್ರಹದಿಂದ ಬಂದಿರುವ ಹಣವೆಷ್ಟು ;

(ಆ) ಇದೇ ಅವಧಿಯಲ್ಲಿ ವಿವಿಧ ಇಲಾಖೆಗಳಿಗೆ ವಿವಿಧ ಲೆಕ್ಕ ಶೀರ್ಷಿಕೆಗಳಡಿಯಲ್ಲಿ ವೆಚ್ಚ ಮಾಡಿರುವ ಹಣವೆಷ್ಟು ; (ಪ್ರತಿ ಇಲಾಖೆಯ ಬಗ್ಗೆ ಪ್ರತ್ಯೇಕ ವಿವರ ಒದಗಿಸುವುದು) ;

(ಇ) ಇಲ್ಲಿಯವರೆವಿಗೆ ಖರ್ಚಾಗದೇ ಉಳಿದಿರುವ ಹಣವೆಷ್ಟು; ಇದೇ ಅವಧಿಯಲ್ಲಿ ರಾಜ್ಯ ಸರ್ಕಾರ ಯಾವ ಯಾವ ಸಂಸ್ಥೆಗಳಿಂದ ಎಷ್ಟೆಷ್ಟು ಮೊತ್ತದ ಸಾಲವನ್ನು ತಂದಿದೆ ? (ಕೇಂದ್ರ, ರಾಜ್ಯದ ವಿವಿಧ ಸಂಸ್ಥೆಗಳಿಂದ ಪಡೆದುಕೊಂಡಿರುವ ಸಾಲದ ಪೂರ್ಣ ವಿವರ ಒದಗಿಸುವುದು)